ಕರ್ನಾಟಕ ಸರ್ಕಾರ

ಸಂ:ಎಎಲ್‌ಎನ್(ಎಜೆ):ಎಸ್‌ಆರ್: 113/12–13

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 22–10–2012.

**<u>ಅಧಿಕೃತ ಜ್ಞಾಪನ</u>**

ವಿಷಯ:– ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಕಾಚನಾಯಕನಹಳ್ಳಿ ಗ್ರಾಮದ ಸರ್ವೆ ನಂಬರ್ 54 ರಲ್ಲಿ 2–36 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತನೆ ಶ್ರೀಮತಿ ಯಲ್ಲಮ್ಮ ಉ: ಹುಚ್ಚೆಲ್ಲಮ್ಮ ಕೋಂ ಲೇಟ್ ವೆಂಕಟರಮಣಪ್ಪ, ಕಾಚನಾಯಕನಹಳ್ಳಿ ಗ್ರಾಮ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ರವರು ಸಲ್ಲಿಸಿರುವ ಅರ್ಜಿ ದಿನಾಂಕ: 06–09–2012.

ಉಲ್ಲೇಖ:–
1) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7–6–1999.
2) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ 2008 ದಿನಾಂಕ:10–9–2008 ಮತ್ತು 24–9–2008.
3) ತಹಶೀಲ್ದಾರ್, ಆನೇಕಲ್ ತಾಲ್ಲೂಕು, ರವರ ವರದಿ ಸಂಖ್ಯೆ: ಎಎಲ್‌ಎನ್:(ಎಸ್) ಸಿಆರ್: 114/2012–13 ದಿನಾಂಕ: 12–09–2012.
4) ಭೂ ಪರಿವರ್ತನಾ ಶುಲ್ಕ ರೂ 1,57,905–00 ಹಾಗೂ ಪೋಡಿ ಶುಲ್ಕ ರೂ. 55–00 ಒಟ್ಟು ರೂ. 1,57,960–00ಗಳನ್ನು ಚಲನ್ ನಂಬರ್ – ದಿ: 17–10–2012ರಂದು ಎಸ್.ಬಿ.ಎಂ. ಆನೇಕಲ್ ಬ್ರಾಂಚ್ ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5)ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ,"ಅಣ್ಣ" ನಂ. 430, ಹೆಸ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು–99 ರವರ ಪತ್ರದ ಸಂಖ್ಯೆ:ಅಯೋಪ್ರಾ/ ಭೂ.ಪ.ಅ/ 680/2012–13 ದಿನಾಂಕ: 29–09–2012.

***

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ.54,450–00 ( ಐವತ್ನಾಲ್ಕು ಸಾವಿರದ ನಾಲ್ಕು ನೂರಾ ಐವತ್ತು ಮಾತ್ರ ) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಶ್ರೀಮತಿ ಯಲ್ಲಮ್ಮ ಉ: ಹುಚ್ಚೆಲ್ಲಮ್ಮ ಕೋಂ ಲೇಟ್ ವೆಂಕಟರಮಣಪ್ಪ, ಕಾಚನಾಯಕನಹಳ್ಳಿ ಗ್ರಾಮ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ರವರ ಅರ್ಜಿಯನ್ನು ಪರಿಗಣಿಸಿ, ಆನೇಕಲ್ ತಾಲ್ಲೂಕು, ಕಾಚನಾಯಕನಹಳ್ಳಿ ಗ್ರಾಮದ ಸರ್ವೆ ನಂಬರ್ 54 ರಲ್ಲಿ 2–36 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ)/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಭೂ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡತಕ್ಕದ್ದಲ್ಲ.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ನೋಂದಣಾಧಿಕಾರಿಗಳಿಂದ ಉಪನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಆದೇಶವು ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ರಸ್ತೆ, ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ದೃಷ್ಟಿಯಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ತಾಕು ಪೂಟ್ ಖರಾಬ್ ಜಮೀನು ಇದ್ದಲ್ಲಿ, ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ತಹಶೀಲ್ದಾರರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

13. ಪರಿಷ್ಕೃತ ಮಾಸ್ಟರ್ ಪ್ಲಾನ್ –2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಭಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

14. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ನಷ್ಟಕ್ಕೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗುವುದಿಲ್ಲ. [illegible] ಅರ್ಜಿದಾರರದ್ದೇ ಆಗಿರುತ್ತದೆ.

17. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

ಷೆಡ್ಯೂಲ್ ವಿವರ

ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಕಾಚನಾಯಕನಹಳ್ಳಿ ಗ್ರಾಮದ ಸರ್ವೆ ನಂಬರ್ 54 ರಲ್ಲಿ 2-36 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

:-ಚೆಕ್ಕುಬಂದಿ :-

| | |
|---|---|
| ಪೂರ್ವಕ್ಕೆ | ರಸ್ತೆ |
| ಪಶ್ಚಿಮಕ್ಕೆ | ಸ.ನಂ.62 |
| ಉತ್ತರಕ್ಕೆ | ಸ.ನಂ. 55 ಮತ್ತು ಸ.ನಂ.60 |
| ದಕ್ಷಿಣಕ್ಕೆ | ಸ.ನಂ. 52 ಮತ್ತು ಸ.ನಂ.53 |

ಸಹಿ/

(ಎಂ.ಕೆ. ಅಯ್ಯಪ್ಪ),
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.

1) ತಹಶೀಲ್ದಾರರು, ಆನೇಕಲ್ ತಾಲ್ಲೂಕು, ಆನೇಕಲ್ ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂ. ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿತಗೊಳಿಸತಕ್ಕದ್ದು.

2) )ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ,"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-99 ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.

4) ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.

5) ಉಪ ನೋಂದಣಾಧಿಕಾರಿಗಳು, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

6) ಅರ್ಜಿದಾರರಾದ ಶ್ರೀಮತಿ ಯಲ್ಲಮ್ಮ ಉ: ಹುಚ್ಚೆಲ್ಲಮ್ಮ ಕೋಂ ಲೇಟ್ ವೆಂಕಟರಮಣಪ್ಪ, ಕಾಚನಾಯಕನಹಳ್ಳಿ ಗ್ರಾಮ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.

7) ಕಚೇರಿ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.